# All India Radio: Bangalore
# National Bulletin In Kannada
# 19.11.2025  7.35 a.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**19.11.2025  7.35 a.m.**

**<><><><>**

ಮುಖ್ಯಾಂಶಗಳು

೧. ಆಂಧ್ರಪ್ರದೇಶ-ತಮಿಳುನಾಡಿಗೆ ಪ್ರಧಾನಿ ನರೇಂದ್ರ ಮೋದಿ ಇಂದು ಭೇಟಿ; ಪಿಎಂ ಕಿಸಾನ್ ಯೋಜನೆಯ ೨೧ನೇ ಕಂತು ಬಿಡುಗಡೆ

೨. ಒಡಿಶಾದ ರೂರ್ಕೆಲಾದ ಉಕ್ಕು ಸ್ಥಾವರದಲ್ಲಿ ೯ ಸಾವಿರ ಕೋಟಿ ರೂಪಾಯಿ ವೆಚ್ಚದ ಬೃಹತ್ ವಿಸ್ತರಣಾ ಯೋಜನೆಗೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಚಾಲನೆ

೩. ಭಾರತೀಯ ರೈಲ್ವೆ ವಿಶ್ವದ ಎರಡನೆಯ ಅತಿ ದೊಡ್ಡ ಸರಕು ಸಾಗಣೆ ವಾಹಕವಾಗಿ ಹೊರಹೊಮ್ಮಿ ಅಮೆರಿಕವನ್ನು ಹಿಂದಿಕ್ಕಿದೆ -ರೈಲ್ವೆ ಸಚಿವ ಅಶ್ವಿನಿ ವೈಷ್ಣವ್

೪. ಬಿಹಾರದಲ್ಲಿ ನೂತನ ಸರ್ಕಾರ ರಚನೆ ಪ್ರಕ್ರಿಯೆ ಆರಂಭ; ಇಂದು ಎನ್‌ಡಿಎ ಮೈತ್ರಿಕೂಟದ ಸಭೆಯಲ್ಲಿ ಶಾಸಕಾಂಗ ನಾಯಕನ ಆಯ್ಕೆ

**<><><><>**

ಪ್ರಧಾನಿ ನರೇಂದ್ರ ಮೋದಿ ಇಂದು ಆಂಧ್ರಪ್ರದೇಶ ಮತ್ತು ತಮಿಳುನಾಡಿಗೆ ಭೇಟಿ ನೀಡಲಿದ್ದಾರೆ. ಮೊದಲಿಗೆ ಆಂಧ್ರಪ್ರದೇಶದ ಪುಟ್ಟಪರ್ತಿಯಲ್ಲಿ ಭಗವಾನ್ ಶ್ರೀ ಸತ್ಯ ಸಾಯಿ ಬಾಬಾ ಅವರ ಪವಿತ್ರ ದೇವಾಲಯ ಮತ್ತು ಮಹಾಸಮಾಧಿ ಸ್ಥಳಕ್ಕೆ ತೆರಳಿ ನಮನ ಸಲ್ಲಿಸಲಿದ್ದಾರೆ. ನಂತರ ಅವರು ಸತ್ಯಸಾಯಿ ಬಾಬಾ ಅವರ ಶತಮಾನೋತ್ಸವ ಆಚರಣೆಯಲ್ಲಿ ಭಾಗವಹಿಸಲಿದ್ದಾರೆ. ಅವರ ಸ್ಮರಣಾರ್ಥ ನಾಣ್ಯ ಮತ್ತು ಅಂಚೆಚೀಟಿಗಳನ್ನು ಬಿಡುಗಡೆ ಮಾಡಿ ಸಾರ್ವಜನಿಕರನ್ನುದ್ದೇಶಿಸಿ ಮಾತನಾಡಲಿದ್ದಾರೆ. ನಂತರ ಪ್ರಧಾನಿ, ತಮಿಳುನಾಡಿನ ಕೊಯಮತ್ತೂರಿಗೆ ಪ್ರಯಾಣಿಸಲಿದ್ದಾರೆ. ಅಲ್ಲಿ ಅವರು ದಕ್ಷಿಣ ಭಾರತ ನೈಸರ್ಗಿಕ ಕೃಷಿ ಶೃಂಗಸಭೆಯನ್ನು ಉದ್ಘಾಟಿಸಿ, ರೈತರೊಂದಿಗೆ ಸಂವಾದ ನಡೆಸಿ ಹತ್ತು ಮಂದಿ ರೈತರನ್ನು ಗೌರವಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಪ್ರಧಾನಿ, ೧೮ ಸಾವಿರದ ೯ ಕೋಟಿ ರೂಪಾಯಿ ಮೊತ್ತದ ಪಿಎಂ-ಕಿಸಾನ್ ನ ೨೧ನೇ ಕಂತನ್ನು ರೈತ ಫಲಾನುಭವಿಗಳಿಗೆ ಬಿಡುಗಡೆ ಮಾಡಲಿದ್ದಾರೆ.

**<><><><>**

ಮುಂದಿನ ತಿಂಗಳು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರಿಗೆ ಆತಿಥ್ಯ ನೀಡಲು ಎದುರು ನೋಡುತ್ತಿರುವುದಾಗಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಭೇಟಿಯಾದ ರಷ್ಯಾದ ಅಧ್ಯಕ್ಷರ ಸಹಾಯಕ ನಿಕೊಲಾಯ್ ಪಟ್ರುಶೇವ್ ಅವರೊಂದಿಗಿನ ಭೇಟಿಯ ಸಂದರ್ಭದಲ್ಲಿ ಈ ವಿಷಯ ಹಂಚಿಕೊಂಡಿದ್ದಾರೆ. ಸಂಪರ್ಕ, ಕೌಶಲ್ಯ ಅಭಿವೃದ್ಧಿ, ಹಡಗು ನಿರ್ಮಾಣ ಮತ್ತು ನೀಲಿ ಆರ್ಥಿಕತೆಯಲ್ಲಿ ಸಹಯೋಗಕ್ಕಾಗಿ ಹೊಸ ಅವಕಾಶಗಳು ಸೇರಿದಂತೆ ಸಮುದ್ರ ವಲಯದಲ್ಲಿ ಸಹಕಾರವನ್ನು ವಿಸ್ತರಿಸುವ ಕುರಿತು ಪಟ್ರುಶೇವ್ ಅವರೊಂದಿಗೆ ಫಲಪ್ರದ ಚರ್ಚೆ ನಡೆಸಿರುವುದಾಗಿ ಪ್ರಧಾನಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಪ್ರಧಾನ ಮಂತ್ರಿ ಕಚೇರಿಯ ಪ್ರಕಾರ, ಪ್ರಧಾನಿ ಮೋದಿ ಅವರು ಅಧ್ಯಕ್ಷ ಪುಟಿನ್ ಅವರಿಗೆ ತಮ್ಮ ಆತ್ಮೀಯ ಶುಭಾಶಯಗಳನ್ನು ತಿಳಿಸಿದರು ಮತ್ತು ಮುಂದಿನ ತಿಂಗಳು ಅವರನ್ನು ಭಾರತಕ್ಕೆ ಸ್ವಾಗತಿಸಲು ಎದುರು ನೋಡುತ್ತಿರುವುದಾಗಿ ಪುನರುಚ್ಚರಿಸಿದರು. ಡಿಸೆಂಬರ್ ಆರಂಭದಲ್ಲಿ ನಿಗದಿಯಾಗಿದ್ದ ಭಾರತ-ರಷ್ಯಾ ಶೃಂಗಸಭೆಯ ಸಿದ್ಧತೆಗಳ ಬಗ್ಗೆಯೂ ಪಟ್ರುಶೇವ್ ಚರ್ಚಿಸಿದರು.

**<><><><>**

ಭಾರತೀಯ ಉಕ್ಕು ಪ್ರಾಧಿಕಾರದ ಮೇಲ್ವಿಚಾರಣೆಯಲ್ಲಿ ಕಾರ್ಯನಿರ್ವಹಿಸುವ ಒಡಿಶಾದ ರೂರ್ಕೆಲಾ ಉಕ್ಕು ಸ್ಥಾವರದಲ್ಲಿ ೯ ಸಾವಿರ ಕೋಟಿ ರೂಪಾಯಿ ವೆಚ್ಚದ ಬೃಹತ್ ಆಧುನೀಕರಣ ಮತ್ತು ವಿಸ್ತರಣಾ ಕಾರ್ಯಕ್ಕೆ ಕೇಂದ್ರ ಉಕ್ಕು ಸಚಿವ ಹೆಚ್.ಡಿ. ಕುಮಾರಸ್ವಾಮಿ ನಿನ್ನೆ ಚಾಲನೆ ನೀಡಿದರು. ಮೂರು ದಿನಗಳ ಒಡಿಶಾ ಪ್ರವಾಸ ಕೈಗೊಂಡಿರುವ ಅವರು ಮಾತನಾಡಿ, ಕಾರ್ಖಾನೆಯ ಉತ್ಪಾದನಾ ಸಾಮರ್ಥ್ಯ ಗರಿಷ್ಠಗೊಳಿಸುವ ಮತ್ತು ಉತ್ಪಾದನಾ ಮೌಲ್ಯ ಸರಪಳಿಯನ್ನು ಬಲಪಡಿಸುವ ಕಾರ್ಯತಂತ್ರದ ಭಾಗವಾಗಿ ಈ ವಿಸ್ತರಣಾ ಯೋಜನೆಯನ್ನು ಕಾರ್ಯಗತಗೊಳಿಸಿದ್ದೇವೆ. ಪ್ರಧಾನಿ ನರೇಂದ್ರ ಮೋದಿ ಅವರ ಸಂಕಲ್ಪದಂತೆ ೨೦೪೭ಕ್ಕೆ ವಿಕಸಿತ ಭಾರತ ಸಾಕಾರಕ್ಕೆ ಅಗತ್ಯವಿರುವ ಮಹತ್ವದ ಕಾಣಿಕೆಯನ್ನು ಭಾರತೀಯ ಉಕ್ಕು ಕ್ಷೇತ್ರ ನೀಡುತ್ತಿದೆ. ಅವರ ಕನಸಿನಂತೆ ಉಕ್ಕು ಕಾರ್ಖಾನೆಗಳಿಗೆ ಶಕ್ತಿ ತುಂಬಲಾಗುತ್ತಿದೆ ಎಂದು ಹೇಳಿದರು. ಕಚ್ಚಾ ಉಕ್ಕಿನ ಸಾಮರ್ಥ್ಯ ಹೆಚ್ಚಿಸುವ ಗುರಿ ಹೊಂದಲಾಗಿದೆ. ಉತ್ಪಾದಕತೆ ಹೆಚ್ಚಿಸಲು ಆಧುನಿಕ ತಂತ್ರಜ್ಞಾನ ಅಳವಡಿಸಲಾಗಿದೆ. ಸ್ವಚ್ಛ ಮತ್ತು ಇಂಧನದ ಕ್ಷಮತೆ ನೀಡಬಲ್ಲ ಕೋಕ್ ಉತ್ಪಾದನೆಗಾಗಿ ಉಪ ಉತ್ಪನ್ನ ನಿರ್ವಹಣಾ ವ್ಯವಸ್ಥೆಗಳೊಂದಿಗೆ ಸಂಯೋಜಿಸಲಾಗಿದೆ ಎಂದು ಸಚಿವರು ವಿವರಿಸಿದರು. ಇಂದು ಸಚಿವ ಕುಮಾರ ಸ್ವಾಮಿ ಅವರು ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ಅವರನ್ನು ಭುವನೇಶ್ವರದಲ್ಲಿ ಭೇಟಿ ಮಾಡಲಿದ್ದಾರೆ. ನಂತರ ಪುರಿಗೆ ತೆರಳಿ ಜಗನ್ನಾಥ ದೇಗುಲದಲ್ಲಿ ಪೂಜೆ ಸಲ್ಲಿಸಲಿದ್ದಾರೆ. ನಾಳೆ ಭುವನೇಶ್ವರದಲ್ಲಿ ನಡೆಯಲಿರುವ ಉಕ್ಕು ಕ್ಷೇತ್ರದ ಚಿಂತನ ಶಿಬಿರದಲ್ಲಿ ಭಾಗಿಯಾಗಲಿದ್ದಾರೆ.

**<><><><>**

ಭಾರತೀಯ ರೈಲ್ವೆ ವಿಶ್ವದ ಎರಡನೆಯ ಅತಿ ದೊಡ್ಡ ರೈಲು ಸರಕು ಸಾಗಣೆ ವಾಹಕವಾಗಿ ಹೊರಹೊಮ್ಮಿದ್ದು, ಈ ಮೂಲಕ ಅಮೆರಿಕವನ್ನು ಹಿಂದಿಕ್ಕಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ದೆಹಲಿಯಲ್ಲಿ ನಿನ್ನೆ ರೈಲ್ವೆ ಭವನದಲ್ಲಿ ರೈಲ್ವೆ

ಅಭಿವೃದ್ಧಿ ಯೋಜನೆ ಕುರಿತ ಸಭೆಯಲ್ಲಿ ಮಾತನಾಡಿದ ಅವರು, ೨೦೨೪-೨೫ರ ಅವಧಿಯಲ್ಲಿ ಸುಮಾರು ೧.೬ ಶತಕೋಟಿ ಮೆಟ್ರಿಕ್ ಟನ್ ಸರಕು ಸಾಗಣೆ ಮಾಡಿದ್ದು, ಇದು ಹಿಂದಿನ ವರ್ಷಗಳಿಗಿಂತ ಗಮನಾರ್ಹ ಹೆಚ್ಚಳವಾಗಿದೆ. ಸರಕು ಸಾಗಣೆಯಲ್ಲಿ ಇನ್ನಷ್ಟು ಪ್ರಗತಿಗಾಗಿ ಇಂದು ದೇಶದಲ್ಲಿ ೧೧೬ ಬಹು ಮಾದರಿ ಟರ್ಮಿನಲ್ ಸ್ಥಾಪನೆ ಮಾಡಲಾಗಿದೆ ಎಂದರು.  ರೈಲ್ವೆಯಲ್ಲಿ ಶೇಕಡ ೧೦೦ರಷ್ಟು ವಿದ್ಯುದೀಕರಣಮಾಡಲಾಗಿದೆ. ರೈಲುಗಳ ಮೂಲಕ ಸಿಮೆಂಟ್ ಸಾಗಾಣಿಕೆಯಲ್ಲಿ ಅಗಾಧ ಪ್ರಗತಿಯಾಗಿದೆ. ಇನ್ನು ಮುಂದೆ ವಿಶೇಷವಾಗಿ ವಿನ್ಯಾಸಗೊಳಿಸಲಾದ ರೈಲು ಬೋಗಿಗಳಲ್ಲಿ ಸಿಮೆಂಟ್ ತಲುಪಲಿದ್ದು, ಅದಕ್ಕಾಗಿ ಅತ್ಯಾಧುನಿಕ ಕಂಟೇನರ್ ಅಭಿವೃದ್ಧಿಪಡಿಸಲಾಗಿದೆ. ಯಾವುದೇ ಪ್ಯಾಕೇಜಿಂಗ್ ಇಲ್ಲದೆ ಸಿಮೆಂಟ್ ಅನ್ನು ನೇರವಾಗಿ ಮಿಶ್ರಣ ಯಂತ್ರಕ್ಕೆ ತಲುಪುವ ವ್ಯವಸ್ಥೆಯಾಗುತ್ತಿದೆ. ಇದು ಸಿಮೆಂಟ್ ಉದ್ಯಮ ಮತ್ತು ನಿರ್ಮಾಣ ವಲಯಕ್ಕೆ ಒಂದು ಕ್ರಾಂತಿಕಾರಿ ಬದಲಾವಣೆಯಾಗಿದೆ. ಸಿಮೆಂಟ್ ನೇರವಾಗಿ ಮಿಶ್ರಣ ಯಂತ್ರಗಳಿಗೆ ತಲುಪಿಸುವ ವ್ಯವಸ್ಥೆ ಮಾಡಲಾಗುತ್ತಿದ್ದು, ಇದರಿಂದ ಮಧ್ಯಮ ವರ್ಗದ ಮನೆಯ ಕನಸಿನ ಸಾಕಾರಕ್ಕೆ ಅನುವು ಮಾಡಿಕೊಡಲಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

<><><><>

ಬಿಹಾರದಲ್ಲಿ ನೂತನ ಸರ್ಕಾರ ರಚನೆ ಪ್ರಕ್ರಿಯೆ ಆರಂಭವಾಗಿದೆ. ಎನ್.ಡಿ.ಎ ಮೈತ್ರಿಕೂಟಕ್ಕೆ ಹೊಸದಾಗಿ ಆಯ್ಕೆಯಾದ ಶಾಸಕರು ಇಂದು ಪಾಟ್ನಾದಲ್ಲಿ ಸಭೆ ಸೇರಿ ತಮ್ಮ ನಾಯಕನನ್ನು ಆಯ್ಕೆ ಮಾಡಲಿದ್ದಾರೆ. ಐದು ಎನ್‌ಡಿಎ ಪಕ್ಷಗಳಾದ - ಬಿಜೆಪಿ, ಸಂಯುಕ್ತ ಜನತಾದಳ, ಲೋಕ ಜನಶಕ್ತಿ ಪಕ್ಷ, ಹಿಂದೂಸ್ತಾನಿ ಅವಾಮ್ ಮೋರ್ಚಾ ಮತ್ತು ರಾಷ್ಟ್ರೀಯ ಲೋಕ ಮೋರ್ಚಾ - ಗಳಿಂದ ಹೊಸದಾಗಿ ಆಯ್ಕೆಯಾದ ಎಲ್ಲಾ ೨೦೨ ಶಾಸಕರು ಸಭೆಯಲ್ಲಿ ಭಾಗವಹಿಸಿ ಮೈತ್ರಿಕೂಟದ ನಾಯಕನನ್ನು ಆಯ್ಕೆ ಮಾಡಲಿದ್ದಾರೆ.

<><><><>

ಕೆಂಪು ಕೋಟೆ ಬಳಿ ನಡೆದ ಕಾರ್ ಬಾಂಬ್ ಸ್ಫೋಟದ ಇತ್ತೀಚಿನ ಘಟನೆಗೆ ಸಂಬಂಧಿಸಿದ ಸೂಕ್ಷ್ಮ ವಿಷಯಗಳನ್ನು ಪ್ರಸಾರ ಮಾಡುವುದರ ಕುರಿತು ಮಾಹಿತಿ ಮತ್ತು ಪ್ರಸಾರ ಸಚಿವಾಲಯವು ಎಲ್ಲಾ ಖಾಸಗಿ ಟಿವಿ ಚಾನೆಲ್‌ಗಳಿಗೆ ಸೂಚನೆ ನೀಡಿದೆ. ಕಾರ್ ಬಾಂಬ್ ಸ್ಫೋಟ ಪ್ರಕರಣದಲ್ಲಿ ಭಾಗಿಯಾಗಿರುವ ಆರೋಪಿಗಳಿಗೆ ಸಂಬಂಧಿಸಿದ ವಿಷಯವನ್ನು ಕೆಲವು ಸುದ್ದಿ ಚಾನೆಲ್‌ಗಳು ಪ್ರಸಾರ ಮಾಡುತ್ತಿರುವುದು ಗಮನಕ್ಕೆ ಬಂದಿದೆ ಎಂದು ಸಚಿವಾಲಯ ತಿಳಿಸಿದೆ.  ಅಂತಹ ಪ್ರಸಾರಗಳು ಅಜಾಗರೂಕತೆಯಿಂದ ಹಿಂಸಾಚಾರವನ್ನು ಪ್ರೋತ್ಸಾಹಿಸಬಹುದು ಅಥವಾ ಪ್ರಚೋದಿಸಬಹುದು, ಸಾರ್ವಜನಿಕ ಸುವ್ಯವಸ್ಥೆಯನ್ನು ಅಡ್ಡಿಪಡಿಸಬಹುದು ಮತ್ತು ರಾಷ್ಟ್ರೀಯ ಭದ್ರತೆಗೆ ಅಪಾಯವನ್ನುಂಟುಮಾಡಬಹುದು ಎಂದು ಸಚಿವಾಲಯ ಹೇಳಿದೆ.

<><><><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ, ಭಾರತ ಅನೇಕ ತಂತ್ರಜ್ಞಾನ ಆಧರಿತ ಕಾರ್ಯಕ್ರಮಗಳಲ್ಲಿ ಮುನ್ನಡೆ ಸಾಧಿಸುತ್ತಿದೆ. ಇದು ಹಲವು ಇಲಾಖೆಗಳಲ್ಲಿ ಬಹು ದೊಡ್ಡ ಬದಲಾವಣೆಗಳನ್ನು ತರುತ್ತಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರ ಹಾಗೂ ಆಹಾರ ಮತ್ತು ಸಾರ್ವಜನಿಕ ವಿತರಣೆ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ದೆಹಲಿಯಲ್ಲಿ ನಿನ್ನೆ ಕೇಂದ್ರ ಗೋದಾಮು ನಿಗಮದ ಡಿಜಿಟಲ್ ವ್ಯವಸ್ಥೆ ಉದ್ಘಾಟಿಸಿ ಮಾತನಾಡಿದ ಅವರು,  ಸಾಗಾಣೆ ವೆಚ್ಚ ಕಡಿತ ಯೋಜನೆಯಲ್ಲಿ ಸಿ.ಡಬ್ಲ್ಯು.ಸಿ ಪ್ರಮುಖ ಪಾತ್ರ ವಹಿಸುತ್ತಿದೆ. ಗೋದಾಮು ಮತ್ತು ಸಾಗಾಣೆ ವಲಯವನ್ನು ದೇಶದ ಆರ್ಥಿಕ ಬೆಳವಣಿಗೆಯ ಪ್ರಮುಖ ಚಾಲಕ ಎಂದೇ ಪರಿಗಣಿಸಲಾಗಿದೆ. ತಂತ್ರಜ್ಞಾನ ವೇಗ ಪಡೆದುಕೊಳ್ಳುತ್ತಿರುವ ಈ ಹೊತ್ತಿನಲ್ಲಿ, ಕೇಂದ್ರ ಗೋದಾಮು ನಿಗಮ ಉತ್ತಮ ಸಾಧನೆ ಮಾಡಲು ಸಾಧ್ಯವಾಗಿದೆ ಎಂದರು. ಆಧುನಿಕ ತಂತ್ರಜ್ಞಾನ ಆಧರಿತ ಗೋದಾಮು ನಿರ್ಮಾಣ ತಂತ್ರಜ್ಞಾನ ವಲಯದಲ್ಲಿ ಕ್ರಾಂತಿಯನ್ನುಂಟು ಮಾಡಿದೆ, ಭಾರತದ ಗೋದಾಮು ಮಾರುಕಟ್ಟೆ ೨೦೨೮ರ ವೇಳೆಗೆ ಗಮನಾರ್ಹವಾಗಿ ಪ್ರಗತಿಯಾಗಲಿದೆ. ಸಾಗಾಣೆ ನೀತಿ ಮತ್ತು ಪಿಎಂ ಗತಿ ಶಕ್ತಿ ಕಾರ್ಯಕ್ರಮ ಆರಂಭಿಸುವ ಮೂಲಕ ಕೇಂದ್ರ ಸರ್ಕಾರ, ಸಾಗಾಣೆ ವೆಚ್ಚವನ್ನು ಕಡಿಮೆ ಮಾಡುತ್ತಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ಹೇಳಿದರು.

<><><><>

ಭಯೋತ್ಪಾದನೆ ಕುರಿತು ಭಾರತ ಶೂನ್ಯ ಸಹಿಷ್ಣುತೆ ಹೊಂದಿದೆ, ಯಾವುದೇ ಕಾರಣಕ್ಕೂ ಭಯೋತ್ಪಾದಕರು ಹಾಗೂ ಅವರನ್ನು ಪೋಷಿಸುವವರನ್ನು ಕ್ಷಮಿಸಲು ಸಾಧ್ಯವೇ ಇಲ್ಲ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ಮೂರು ದಿನಗಳ ರಷ್ಯಾ ಭೇಟಿಯಲ್ಲಿರುವ ಸಚಿವರು, ಮಾಸ್ಕೋದಲ್ಲಿ ನಿನ್ನೆ ಎಸ್.ಸಿ.ಒ ಮುಖ್ಯಸ್ಥರ ಪರಿಷತ್ತಿನ ಸಭೆಯಲ್ಲಿ ಮಾತನಾಡಿ, ಭಯೋತ್ಪಾದನೆಯ ಎಲ್ಲಾ ರೂಪಗಳು ಮತ್ತು ಅಭಿವ್ಯಕ್ತಿಗಳ ಬಗ್ಗೆ ಜಗತ್ತು ಶೂನ್ಯ ಸಹಿಷ್ಣುತೆಯನ್ನು ಪ್ರದರ್ಶಿಸುವುದು ಅಗತ್ಯವಾಗಿದೆ. ಯಾವುದೇ ಸಮರ್ಥನೆ ಸರಿಯಲ್ಲ. ಭಾರತ ಪ್ರದರ್ಶಿಸಿದಂತೆ, ಭಯೋತ್ಪಾದನೆಯ ವಿರುದ್ಧ ನಮ್ಮ ಜನರನ್ನು ರಕ್ಷಿಸುವ ಹಕ್ಕು ನಮಗಿದೆ ಎಂದರು. ವಿಶ್ವ ಇಂದು ಆರ್ಥಿಕತೆಯ ಕ್ಷೇತ್ರದಲ್ಲಿ ಅನಿಶ್ಚಿತ ಮತ್ತು ಅಸ್ಥಿರದಿಂದ ಕೂಡಿದೆ. ಪೂರೈಕೆಗಿಂತಲೂ ಬೇಡಿಕೆಯ ಒತ್ತಡಗಳು ಹೆಚ್ಚಾಗುತ್ತಿವೆ. ಅಂತಹ ವಾತಾವರಣದಲ್ಲಿ, ರಾಷ್ಟ್ರಗಳು ತುರ್ತಾಗಿ ಅಪಾಯವನ್ನು ಕಡಿಮೆ ಮಾಡಬೇಕು ಮತ್ತು ತಮ್ಮ ಆರ್ಥಿಕ ತೊಡಗಿಸಿಕೊಳ್ಳುವಿಕೆಯನ್ನು ಹೆಚ್ಚಿಸಬೇಕಾಗಿದೆ. ಭಾರತ ಮತ್ತು ರಷ್ಯಾ ಸಂಬಂಧ ವೃದ್ಧಿಯಾಗುತ್ತಿದೆ ಎಂದು ಸಚಿವ ಡಾ. ಎಸ್. ಜೈಶಂಕರ್ ಹೇಳಿದರು.

<><><><>

ಭಾರತ ಮತ್ತು ಅಮೆರಿಕ ಪಾಲುದಾರಿಕೆ ಪ್ರಬಲವಾಗಿದ್ದು, ಕಾರ್ಯತಂತ್ರ ಮತ್ತು ಆರ್ಥಿಕ ಕ್ಷೇತ್ರಗಳಲ್ಲಿ ವಿಸ್ತರಿಸುತ್ತಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ದೆಹಲಿಯಲ್ಲಿ ನಿನ್ನೆ ಇಂಡೋ ಅಮೇರಿಕನ್ ಚೇಂಬರ್ ಆಫ್ ಕಾಮರ್ಸ್ ಉದ್ದೇಶಿಸಿ ಮಾತನಾಡಿದ ಅವರು, ಉಭಯ ದೇಶಗಳ ದ್ವಿಪಕ್ಷೀಯ ಸಂಬಂಧದ ಬಗ್ಗೆ ಯಾವುದೇ ಕಳವಳಕ್ಕೆ ಅವಕಾಶವಿಲ್ಲ. ಎರಡೂ ರಾಷ್ಟ್ರಗಳ ನಡುವಿನ ಸ್ನೇಹ, ಪ್ರಜಾಪ್ರಭುತ್ವ, ವೈವಿಧ್ಯತೆ ಮತ್ತು ಹಂಚಿಕೆಯ ಅಭಿವೃದ್ಧಿ ದೃಷ್ಟಿಕೋನದ ದೃಢ ಸ್ತಂಭಗಳ ಮೇಲೆ ನಿಂತಿದೆ ಎಂದರು. ದುರ್ಬಲ ಐದು ದೇಶಗಳಲ್ಲಿ ಒಂದೆಂದು ಗುರುತಿಸಿಕೊಂಡಿದ್ದ ಭಾರತ ಕಳೆದ ದಶಕದಿಂದೀಚೆಗೆ ಅಗ್ರ ಐದು ಜಾಗತಿಕ ಆರ್ಥಿಕತೆಗಳಲ್ಲಿ ಒಂದಾಗಿದೆ. ೨೦೨೮ರ ವೇಳೆಗೆ ಭಾರತವು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗುವ ಹಾದಿಯಲ್ಲಿದೆ. ಕಳೆದ ೧೧ ವರ್ಷಗಳಲ್ಲಿ ಭಾರತೀಯ ಷೇರು ಮಾರುಕಟ್ಟೆ ಸುಮಾರು ನಾಲ್ಕೂವರೆ ಪಟ್ಟು ಬೆಳೆದಿದೆ, ೨ ಸಾವಿರಕ್ಕೂ ಹೆಚ್ಚು ಜಾಗತಿಕ ಸಾಮರ್ಥ್ಯ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿದ್ದು, ಅವುಗಳಲ್ಲಿ ಹಲವು ಅಮೆರಿಕದಿಂದ ಭಾರತದಲ್ಲಿ ಕಾರ್ಯನಿರ್ವಹಿಸುತ್ತಿವೆ ಮತ್ತು ಭಾರತೀಯ ಪ್ರತಿಭೆಯನ್ನು ಬಳಸಿಕೊಳ್ಳುತ್ತಿವೆ ಎಂದು ತಿಳಿಸಿದರು.

**<><><><>**

ಕತಾರ್‌ನ ದೋಹಾದ ವೆಸ್ಟ್ ಎಂಡ್ ಪಾರ್ಕ್‌ನಲ್ಲಿ ನಿನ್ನೆ ನಡೆದ ತನ್ನ ಕೊನೆಯ ಗ್ರೂಪ್ ಬಿ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಒಮನ್ ವಿರುದ್ಧ ಆರು ವಿಕೆಟ್‌ಗಳ ಜಯ ಸಾಧಿಸುವ ಮೂಲಕ ಭಾರತ ಎ ತಂಡವು ರೈಸಿಂಗ್ ಸ್ಟಾರ್ಸ್ ಏಷ್ಯಾ ಕಪ್ ಟೂರ್ನಿಯಲ್ಲಿ ಸೆಮಿಫೈನಲ್ಸ್ ಗೆ ಲಗ್ಗೆ ಇಟ್ಟಿದೆ. ಮೊದಲು ಬ್ಯಾಟ್ ಮಾಡಿದ ಓಮನ್ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೩೫ ರನ್ ಗಳಿಸಿತು. ಭಾರತ ಎ ತಂಡವು ಆತ್ಮವಿಶ್ವಾಸದಿಂದ ಗುರಿಯನ್ನು ಬೆನ್ನಟ್ಟಿ ೧೭.೫ ಓವರ್‌ಗಳಲ್ಲಿ ೪ ವಿಕೆಟ್‌ಗೆ ೧೩೮ ರನ್ ಗಳಿಸಿ ಗೆಲುವಿನ ನಗೆ ಬೀರಿತು.

**<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>**

**<><> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <><>**